DEPARTMENT / SUBJECT: ಬಿಜೆಪಿ ಸರ್ಕಾರ ರಚನೆ

NAME OF THE NEWS PAPER: ಕನ್ನಡ ಪ್ರಭ    DATE: 26/10/2019

# ಹರ್ಯಾಣದಲ್ಲಿ ಮತ್ತೆ ಬಿಜೆಪಿ ಸರ್ಕಾರ ರಚನೆ

## ಬಿಜೆಪಿಗೆ 7 ಪಕ್ಷೇತರರು, ದುಷ್ಯಂತ್ ನೇತೃತ್ವದ ಜೆಜೆಪಿ ಬೆಂಬಲ ಘೋಷಣೆ

## ಮನೋಹರ್‌ಲಾಲ್ ಖಟ್ಟರ್ ಸಿಎಂ, ದುಷ್ಯಂತ್ ಚೌಟಾಲಾಗೆ ಡಿಸಿಎಂ ಪಟ್ಟ



ಜಂಟಿ ಸುದ್ದಿಗೋಷ್ಠಿ ಬಳಿಕ ಅಮಿತ್ ಶಾ, ಖಟ್ಟರ್, ದುಷ್ಯಂತ್ ಚೌಟಾಲಾ

• **ಪಿಟಿಐ** ನವದೆಹಲಿ/ಚಂಡೀಗಢ

ಅತಂತ್ರ ವಿಧಾನಸಭೆ ಸೃಷ್ಟಿಯಾಗಿರುವ ಹರ್ಯಾಣದಲ್ಲಿ, ಅತಿದೊಡ್ಡ ಪಕ್ಷವಾಗಿ ಹೊರಹೊಮ್ಮಿರುವ ಬಿಜೆಪಿ ಸರ್ಕಾರ ರಚಿಸುವುದು ಖಚಿತವಾಗಿದೆ. ಬಹುಮತಕ್ಕೆ 6 ಸ್ಥಾನಗಳ ಕೊರತೆ ಎದುರಿಸುತ್ತಿದ್ದ ಬಿಜೆಪಿಗೆ 7 ಪಕ್ಷೇತರ ಶಾಸಕರು ಬೆಂಬಲ ವ್ಯಕ್ತಪಡಿಸಿದ ಬೆನ್ನಲ್ಲೇ, 10 ಶಾಸಕರನ್ನು ಹೊಂದಿರುವ ಜನನಾಯಕ ಜನತಾ ಪಕ್ಷ (ಜೆಜೆಪಿ) ಕೂಡಾ ಬೆಂಬಲ ವ್ಯಕ್ತಪಡಿಸಿದೆ. ಇದರೊಂದಿಗೆ ರಾಜ್ಯದಲ್ಲಿ ಬಿಜೆಪಿ ಸರ್ಕಾರ ರಚನೆಗೆ ಹಾದಿ ಸುಗಮವಾಗಿದೆ.

ಹಾಲಿ ಮುಖ್ಯಮಂತ್ರಿ ಮನೋಹರ್ ಲಾಲ್ ಖಟ್ಟರ್ ಅವರೇ ರಾಜ್ಯದ ನೂತನ ಮುಖ್ಯಮಂತ್ರಿಯಾಗಿ ಮುಂದುವರೆಯಲಿದ್ದು, ಜೆಜೆಪಿ ನಾಯಕ ದುಷ್ಯಂತ್ ಚೌಟಾಲಾ ಉಪಮುಖ್ಯಮಂತ್ರಿಯಾಗಲಿದ್ದಾರೆ.

ಶನಿವಾರ ಬಿಜೆಪಿ ಶಾಸಕಾಂಗ ಪಕ್ಷದ ಸಭೆ ನಡೆಯಲಿದ್ದು, ಅಲ್ಲಿ ನಾಯಕರಾಗಿ ಖಟ್ಟರ್ ಅವರನ್ನು ಆಯ್ಕೆ ಮಾಡಲಾಗುವುದು. ಬಳಿಕ ಖಟ್ಟರ್ ರಾಜ್ಯಪಾಲರನ್ನು ಭೇಟಿ ಮಾಡಿ ಸರ್ಕಾರ ರಚನೆಯ ಹಕ್ಕು ಮಂಡಿಸಲಿದ್ದಾರೆ.

**ದಿಲ್ಲಿಯಲ್ಲಿ ಕಸರತ್ತು:** ಹರ್ಯಾಣ ವಿಧಾನಸಭೆಗೆ ಆಯ್ಕೆಯಾದ 7 ಪಕ್ಷೇತರ ಸದಸ್ಯರು ಶುಕ್ರವಾರ ಬಿಜೆಪಿ ಕಾರ್ಯಾಧ್ಯಕ್ಷ ಜೆ.ಪಿ. ನಡ್ಡಾ ಅವರನ್ನು ಭೇಟಿಯಾಗಿ ಸರ್ಕಾರಕ್ಕೆ 'ಬೇಷರತ್ ಬೆಂಬಲ' ಪ್ರಕಟಿಸಿದರು. ಐಎನ್‌ಎಲ್‌ಡಿಯ ಏಕೈಕ ಶಾಸಕ ಅಭಯ್ ಚೌಟಾಲಾ ಕೂಡ ಬಿಜೆಪಿ ಬೆಂಬಲಿಸುವ ಸಾಧ್ಯತೆ ಇದೆ.

**ದುಷ್ಯಂತ್ ಬೆಂಬಲ:** ಈ ನಡುವೆ ಜೆಜೆಪಿ ನಾಯಕ ದುಷ್ಯಂತ್ ಚೌಟಾಲಾ ಶುಕ್ರವಾರ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಅಮಿತ್ ಶಾ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದರು. ಈ ವೇಳೆ ಶೇ.75ರಷ್ಟು ಸ್ಥಳೀಯರಿಗೆ ಉದ್ಯೋಗ ಮೀಸಲು ಸಿಗಬೇಕು ಎಂಬ ಷರತ್ತನ್ನು ಬಿಜೆಪಿ ಒಪ್ಪಿಕೊಂಡಿತು. ಜೊತೆಗೆ ದುಷ್ಯಂತ್ ಚೌಟಾಲಾ ಅವರ ಪಕ್ಷಕ್ಕೆ ಡಿಸಿಎಂ ಹುದ್ದೆ ನೀಡಲೂ ಶಾ ಒಪ್ಪಿಕೊಂಡರು. ಅದರ ಬೆನ್ನಲ್ಲೇ ಜೆಜೆಪಿ ಸರ್ಕಾರ ರಚನೆಗೆ ಬಿಜೆಪಿಗೆ ಬೆಂಬಲ ಘೋಷಿಸಿತು.

**ಪಕ್ಷೇತರರಲ್ಲಿ ಬಿಜೆಪಿ ಬಂಡುಕೋರರೇ ಹೆಚ್ಚು:** 90 ಶಾಸಕರ ಬಲ ಇರುವ ಹರ್ಯಾಣದಲ್ಲಿ ಬಿಜೆಪಿ 40, ಕಾಂಗ್ರೆಸ್ 31, ಜೆಜೆಪಿ 10, ಐಎನ್‌ಎಲ್‌ಡಿ 1 ಹಾಗೂ ಪಕ್ಷೇತರರು 8 ಸ್ಥಾನದಲ್ಲಿ ಗೆದ್ದಿದ್ದಾರೆ. ಪಕ್ಷೇತರರಲ್ಲಿ ಬಿಜೆಪಿ ಬಂಡುಕೋರರೇ ಹೆಚ್ಚು.

**ನವದೆಹಲಿ:** ಅತಂತ್ರ ವಿಧಾನಸಭೆ ಸೃಷ್ಟಿಯಾಗಿರುವ ಹರ್ಯಾಣದಲ್ಲಿ ಸರ್ಕಾರ ರಚಿಸುವ ಧಾವಂತದಲ್ಲಿರುವ ಬಿಜೆಪಿ, ಅತ್ಯಾಚಾರ ಆರೋಪಿಯಾಗಿರುವ ವಿವಾದಾತ್ಮಕ ಪಕ್ಷೇತರ ಶಾಸಕ ಗೋಪಾಲ್ ಕಾಂಡಾ ಬೆಂಬಲ ಪಡೆಯಲು ಮುಂದಾಗಿರುವುದಕ್ಕೆ ವ್ಯಾಪಕ ಆಕ್ರೋಶ ವ್ಯಕ್ತವಾಗಿದೆ.



ಬಿಜೆಪಿಯ ಉಪಾಧ್ಯಕ್ಷೆಯಾಗಿರುವ ಕೇಂದ್ರದ ಮಾಜಿ ಸಚಿವೆ ಉಮಾ ಭಾರತಿ ಅವರೇ ಇದರ ವಿರುದ್ಧ ಸಿಡಿದೆದ್ದಿದ್ದಾರೆ. ಬಿಜೆಪಿ ತನ್ನ ನೈತಿಕ ಉದ್ದೇಶವನ್ನು ಮರೆಯಬಾರದು. ಗೋಪಾಲ್ ಕಾಂಡಾರಿಂದ ಬೆಂಬಲ ಪಡೆಯಬಾರದು. ಚುನಾವಣೆಯಲ್ಲಿ ಗೆದ್ದಾಕ್ಷಣ ಕಾಂಡಾ ಆರೋಪ ಮುಕ್ತರಾಗುವುದಿಲ್ಲ ಎಂದು ಚಾಟಿ ಬೀಸಿದ್ದಾರೆ. ಹೆಣ್ಣು ಭ್ರೂಣ ಹತ್ಯೆ ವಿರುದ್ಧ 'ಬೇಟಿ ಬಚಾವೋ ಬೇಟಿ ಪಢಾವೋ' ಅಭಿಯಾನ ಆರಂಭಿಸಿದ್ದ ಬಿಜೆಪಿಗ ರೇಪ್ ಆರೋಪಿ ಕಿಂಗ್ ಮೇಕರ್ ಆಗಿದ್ದಾರೆ ಎಂದು ಸಾಮಾಜಿಕ ಜಾಲತಾಣಗಳಲ್ಲಿ ತೀವ್ರ ಟೀಕೆಗಳು, ಕುಹಕಗಳು ವ್ಯಕ್ತವಾಗಿವೆ. ಇದು ಬಿಜೆಪಿಯ ಬೂಟಾಟಿಕೆ ಎಂದು ಹಲವು ಕಾಂಗ್ರೆಸ್ ನಾಯಕರು ಹರಿಹಾಯ್ದಿದ್ದಾರೆ.

### ಯಾರು ಈ ಕಾಂಡಾ?

ಕಾಂಡಾ ಅವರು ಒಂದು ವಿಮಾನ ಕಂಪನಿ ನಡೆಸುತ್ತಿದ್ದರು. ಅದರಲ್ಲಿ ಗಗನಸಖಿಯಾಗಿದ್ದವರೊಬ್ಬರು, ಕಾಂಡಾ ಅವರಿಂದ ತಮಗೆ ಕಿರುಕುಳವಾಗಿದೆ ಎಂದು ಮರಣ ಪತ್ರ ಬರೆದು 2012ರಲ್ಲಿ ಆತ್ಮಹತ್ಯೆ ಮಾಡಿಕೊಂಡಿದ್ದರು. ಕಾಂಡಾ ವಿರುದ್ಧ ಅತ್ಯಾಚಾರ, ಆತ್ಮಹತ್ಯೆಗೆ ಕುಮ್ಮಕ್ಕು, ಕ್ರಿಮಿನಲ್ ಸಂಚು, ಕ್ರಿಮಿನಲ್ ಬೆದರಿಕೆ ಪ್ರಕರಣಗಳನ್ನು ದಾಖಲಿಸಿ ಪೊಲೀಸರು ಬಂಧಿಸಿದ್ದರು. ಕೆಲವೇ ತಿಂಗಳಲ್ಲಿ ಗಗನಸಖಿಯ ತಾಯಿ ಕೂಡ ಮರಣಪತ್ರ ಬರೆದಿಟ್ಟು ಆತ್ಮಹತ್ಯೆ ಮಾಡಿಕೊಂಡಿದ್ದರು. 2014ರ ಮಾರ್ಚ್‌ನಲ್ಲಿ ಕಾಂಡಾ ಜೈಲಿನಿಂದ ಬಿಡುಗಡೆಯಾಗಿದ್ದರು. ಅವರ ವಿರುದ್ಧ ಅತ್ಯಾಚಾರ ಆರೋಪವು ಕೈಬಿಡಲಾಗಿದೆಯಾದರೂ, ಆತ್ಮಹತ್ಯೆಗೆ ಕುಮ್ಮಕ್ಕು ನೀಡಿದ ಆರೋಪವನ್ನು ಈಗಲೂ ಎದುರಿಸುತ್ತಿದ್ದಾರೆ.

12